ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ದೂರವಾಣಿ: 080-22343904/05

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು,ದಿನಾಂಕ:16.09.2016.

ಸಂಖ್ಯೆ: ಕಾಶಿಇ/ಶೈವಿ/86/ಸುತ್ತೋಲೆ/2016-17

# ಸುತ್ತೋಲೆ

ವಿಷಯ: "ನ್ಯಾಷನಲ್ ಟೀಚರ್ಸ್ ಕಾಂಗ್ರೆಸ್"(NTC) ನಲ್ಲಿ ಭಾಗವಹಿಸಲು ಅನುಮತಿ ನೀಡುವ ಬಗ್ಗೆ.

ಉಲ್ಲೇಖ: 1. ಮಾನ್ಯ ಮುಖ್ಯಮಂತ್ರಿಗಳು, ಮಹಾರಾಷ್ಟ್ರ ಸರ್ಕಾರ ರವರ ಸರ್ಕಾರಿ ಪತ್ರ ಸಂಖ್ಯೆ:ಸಿಎಂಎಸ್/16/1695334, ದಿನಾಂಕ:29.062016.
2. ಸರ್ಕಾರದ ಪತ್ರ ಸಂಖ್ಯೆ: ಇಡಿ 87 ಅಅವಿ 2016, ದಿನಾಂಕ:29.08.2016.

* * * * * *

ಪದವಿ ಹಾಗೂ ಸ್ನಾತಕೋತ್ತರ ಪದವಿ ಕಾಲೇಜುಗಳ ಬೋಧಕರ ವೃಂದವನ್ನು ಪ್ರೋತ್ಸಾಹಿಸುವ ಸದುದ್ದೇಶದಿಂದ ಪುಣೆ, ಮಹಾರಾಷ್ಟ್ರ ಇಲ್ಲಿ 2016 ರ ಸೆಪ್ಟೆಂಬರ್ 23, 24 ಮತ್ತು 25 ರಂದು ಮೊದಲನೇ "ನ್ಯಾಷನಲ್ ಟೀಚರ್ಸ್ ಕಾಂಗ್ರೆಸ್" ಅನ್ನು ಆಯೋಜಿಸಲಾಗಿದ್ದು, ಸದರಿ ಸಮಾವೇಶದಲ್ಲಿ ಭಾಗವಹಿಸಲು ಇಲಾಖಾ ವ್ಯಾಪ್ತಿಯ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಅಧ್ಯಾಪಕರುಗಳಿಗೆ ಅನುಮತಿ ನೀಡಲಾಗಿದೆ ಹಾಗೂ ಸದರಿ ಸಮಾವೇಶದಲ್ಲಿ ಭಾಗವಹಿಸುವ ಅಧ್ಯಾಪಕರುಗಳಿಗೆ ಹಾಜರಾತಿ ಪ್ರಮಾಣ ಪತ್ರವನ್ನು ಸಂಬಂಧಿಸಿದ ಅಧಿಕಾರಿ / ಪ್ರಾಂಶುಪಾಲರುಗಳಿಗೆ ಒಪ್ಪಿಸುವ ನಿಬಂಧನೆಗೊಳಪಟ್ಟು ಸಂಬಂಧಪಟ್ಟ ದಿನಾಂಕಗಳಂದು ಅನ್ಯಕಾರ್ಯನಿಮಿತ್ತ ರಜೆಯನ್ನು ಮಂಜೂರು ಮಾಡಲಾಗಿದೆ.

**ಹೆಚ್ಚಿನ ಮಾಹಿತಿಗಾಗಿ:** ಶ್ರೀ ರಾಹುಲ್ ವಿ. ಕರಡ್, ದೂರವಾಣಿ:9881721353/8888815421/22/24/25
ಇ-ಮೇಲ್ ವಿಳಾಸ:info@nationalteachers.com
ವೆಬ್‌ಸೈಟ್:www.nationalteachers.com

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:
1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಗುಲಬರ್ಗಾ- ತಮ್ಮ ವ್ಯಾಪ್ತಿಗೆ ಬರುವ ಎಲ್ಲಾ ಸರ್ಕಾರಿ/ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ರವಾನಿಸಲು ಸೂಚಿಸಲಾಗಿದೆ.
2. ರಾಜ್ಯದ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಮತ್ತು ಅನುದಾನ ರಹಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ (ಪ್ರಾದೇಶಿಕ ಜಂಟಿ ನಿರ್ದೇಶಕರ ಮುಖಾಂತರ)- ಅಗತ್ಯ ಕ್ರಮಕ್ಕಾಗಿ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾ.ಶಿ.ಆ. ಕಛೇರಿ, ಬೆಂಗಳೂರು- ಕೂಡಲೇ ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕ್ರಮವಹಿಸುವುದು.

ಪ್ರತಿಯನ್ನು:-
1. ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ ಸಚಿವಾಲಯ, ಬಹುಮಹಡಿಗಳ ಕಟ್ಟಡ, ಬೆಂಗಳೂರು-560001.
2. ಕಛೇರಿ ಪ್ರತಿ.